# All India Radio: Bangalore
# Regional Bulletin In Kannada
## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

## 09.05.2026 / 2.30 p.m.

**<><><><>**

ಮುಖ್ಯಾಂಶಗಳು

1. ಪ್ರಧಾನಿ ನರೇಂದ್ರ ಮೋದಿ ನಾಳೆ ರಾಜ್ಯ ಭೇಟಿ ; ಬೆಂಗಳೂರಿನಲ್ಲಿ ಆರ್ಟ್ ಆಫ್ ಲಿವಿಂಗ್ ಕಾರ್ಯಕ್ರಮದಲ್ಲಿ ಭಾಗಿ
2. ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಪೆನುಗೊಂಡವರೆಗೆ ದಶಪಥ ರಸ್ತೆ ನಿರ್ಮಾಣ : ಸಚಿವ ಕೆ.ಎಚ್.ಮುನಿಯಪ್ಪ
3. ಕರಾವಳಿ ಭಾಗದಲ್ಲಿ ನೆರೆ ಹಾವಳಿ ಮುನ್ನೆಚ್ಚರಿಕೆ ವಹಿಸುವಂತೆ ಸಚಿವ ದಿನೇಶ್ ಗುಂಡೂರಾವ್ ಅಧಿಕಾರಿಗಳಿಗೆ ಸೂಚನೆ
4. ಭಾರತೀಯ ಅರಣ್ಯ ಸೇವೆ ಪರೀಕ್ಷೆಯಲ್ಲಿ ರಾಜ್ಯದ ಬಸವರಾಜ್ ಕೆಂಪವಾಡ್‌ಗೆ ಪ್ರಥಮ ರ್‍ಯಾಂಕ್

<><><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ನಾಳೆ ಕರ್ನಾಟಕ ಮತ್ತು ತೆಲಂಗಾಣ ಪ್ರವಾಸ ಕೈಗೊಳ್ಳಲಿದ್ದು, ಮೊದಲಿಗೆ ಅವರು, ಬೆಂಗಳೂರಿನ ಆರ್ಟ್ ಆಫ್ ಲಿವಿಂಗ್ ಕೇಂದ್ರಕ್ಕೆ ಆಗಮಿಸಿ, ಅದರ ೪೫ನೇ ವಾರ್ಷಿಕೋತ್ಸವ ಸಂಭ್ರಮಾಚರಣೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ಮಧ್ಯಾಹ್ನ ಅವರು, ಹೈದರಾಬಾದ್‌ಗೆ ಪ್ರಯಾಣ ಬೆಳಸಲಿದ್ದು, ಅಲ್ಲಿ ಸುಮಾರು ೯ ಸಾವಿರದ ೪೦೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ ನೀಡುವರಲ್ಲದೆ, ಕೆಲ ಯೋಜನೆಗಳನ್ನು ರಾಷ್ಟ್ರಕ್ಕೆ ಸಮರ್ಪಿಸಲಿದ್ದಾರೆ.

<><><><>

ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಆಂಧ್ರದ ಪೆನುಗೊಂಡ ವರಗೆ ೨ ಸಾವಿರದ ೪೦೦ ಕೋಟಿ ರೂಪಾಯಿ ವೆಚ್ಚದಲ್ಲಿ ದಶಪಥದ ರಸ್ತೆ ನಿರ್ಮಾಣ ಮಾರ್ಚ್ ನಿಂದ ಆರಂಭಗೊಳ್ಳುತ್ತಿದೆ. ದಶಪಥ ಹಾದು ಹೋಗುವ ಎಲ್ಲಾ ಪ್ರಮುಖ ಗ್ರಾಮಗಳಲ್ಲಿ ಬೆಂಗಳೂರು-ಮೈಸೂರು ಹೆದ್ದಾರಿ ಮಾದರಿಯಲ್ಲಿ ಅಂಡರ್ ಪಾಸ್ ನಿರ್ಮಾಣವಾಗಲಿದ್ದು, ಅಪಘಾತಗಳ ತಡೆ ಹಾಗೂ ಜನರ ಸುಗಮ ಸಂಚಾರಕ್ಕೆ ಶಾಶ್ವತ ಪರಿಹಾರ ಸಿಗಲಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವ ಕೆ.ಹೆಚ್. ಮುನಿಯಪ್ಪ ಹೇಳಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆ ದೇವನಹಳ್ಳಿ ತಾಲ್ಲೂಕಿನ ಮುದುಗುರ್ಕಿ ಗ್ರಾಮದ ಬಳಿ ನಡೆದ ಅಪಘಾತಕ್ಕೆ

ಸಂಬಂಧಿಸಿದಂತೆ ಗ್ರಾಮಸ್ಥರ ಅಹವಾಲು ಆಲಿಸಿದ ಸಚಿವರು ಮುದುಗುರ್ಕಿ ಬಳಿ ಸಂಭವಿಸಿದ ಅಪಘಾತದಲ್ಲಿ ಮೃತಪಟ್ಟ ಕುಟುಂಬದವರಿಗೆ ಸಾಂತ್ವನ ಹೇಳಿದರಲ್ಲದೆ, ಮಕ್ಕಳ ವಿಧ್ಯಾಭ್ಯಾಸಕ್ಕೆ ನೆರವು ನೀಡಲಾಗುವುದು ಎಂದು ತಿಳಿಸಿದರು.

<><><>

ಮುಂಬರುವ ಮಳೆಗಾಲದಲ್ಲಿ ನೆರೆ ಮತ್ತು ನೀರು ನಿಲ್ಲಬಹುದಾದ ಪ್ರದೇಶಗಳನ್ನು ಮೊದಲೇ ಗುರುತಿಸಿ ಅಗತ್ಯ ಮುನ್ನೆಚ್ಚರಿಕೆ ವಹಿಸುವಂತೆ ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಮಂಗಳೂರಿನಲ್ಲಿ ಮಳೆಗಾಲ ಪೂರ್ವಸಿದ್ಧತೆ ಬಗ್ಗೆ ನಡೆದ ಸಭೆಯಲ್ಲಿ ಸಚಿವರು, ಕಳೆದ ವರ್ಷ ನೆರೆ ಬಂದ ಪ್ರದೇಶಗಳು ಹಾಗೂ ಭೂಕುಸಿತವಾದ ಜನವಸತಿ ಪ್ರದೇಶಗಳಿಗೆ ಅಧಿಕಾರಿಗಳು ತಕ್ಷಣವೇ ತೆರಳಿ ಮುಂದಾಗುವ ಅಪಾಯ ತಡೆಯಲು ಈಗಿನಿಂದಲೇ ಕ್ರಮವಹಿಸಬೇಕು. ಚರಂಡಿ ರಾಜಕಾಲುವೆಗಳ ಹೂಳೆತ್ತುವ ಕಾರ್ಯವನ್ನು ತ್ವರಿತಗೊಳಿಸಬೇಕು. ಈ ಸಂಬಂಧ ಇಲಾಖೆಗಳು ಪರಸ್ಪರ ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದರು. ಜಿಲ್ಲಾಧಿಕಾರಿ ಎಚ್.ವಿ. ದರ್ಶನ್ ಮಾತನಾಡಿ, ಜಿಲ್ಲೆಯಲ್ಲಿ ಸಮುದ್ರ ಕೊರೆತ ಉಂಟಾಗಬಹುದಾದ ೮ ಪ್ರದೇಶಗಳನ್ನು ಗುರುತಿಸಿ ಅಪಾಯದ ಪ್ರಮಾಣವನ್ನು ತಗ್ಗಿಸಲು ಕ್ರಮವಹಿಸಲಾಗಿದೆ. ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿ ತುರ್ತು ವಿಪತ್ತು ನಿರ್ವಹಣೆಗೆ ದಿನದ ೨೪ ಗಂಟೆಯೂ ಕಾರ್ಯನಿರ್ವಹಿಸುವ ನಿಯಂತ್ರಣ ಕೊಠಡಿಗಳನ್ನು ತೆರೆಯಲಾಗಿದೆ ಎಂದು ಹೇಳಿದರು.

<><><>

ಭಾರತೀಯ ಅರಣ್ಯ ಸೇವೆ-ಐಎಫ್ಎಸ್ ಪರೀಕ್ಷೆಯಲ್ಲಿ ಕನ್ನಡಿಗ ಬಸವರಾಜ್ ಕೆಂಪವಾಡ್ ಪ್ರಥಮ ರ್‍ಯಾಂಕ್ ಗಳಿಸಿದ್ದಾರೆ. ಇದೇ ಪರೀಕ್ಷೆಯಲ್ಲಿ ರಾಜ್ಯದ ಎನ್.ದೀಕ್ಷಿತ್ ಅವರು ೧೪ನೇ ರ್‍ಯಾಂಕ್ ಪಡೆದಿದ್ದು, ರಾಜ್ಯದ ಹಿರಿಮೆಯನ್ನು ಮತ್ತಷ್ಟು ಹೆಚ್ಚಿಸಿದ್ದಾರೆ. ಐಎಫ್ಎಸ್ ಪರೀಕ್ಷೆಯಲ್ಲಿ ಪ್ರಥಮ ರ್‍ಯಾಂಕ್ ಪಡೆದಿರುವ ಬಸವರಾಜ್ ಕೆಂಪವಾಡ್ ಹಾಗೂ ೧೪ನೇ ರ್‍ಯಾಂಕ್ ಪಡೆದಿರುವ ಎನ್.ದೀಕ್ಷಿತ್ ಅವರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಹಲವು ಗಣ್ಯರು ಅಭಿನಂದನೆ ಸಲ್ಲಿಸಿದ್ದಾರೆ. ಈ ಇಬ್ಬರ ಸಾಧನೆಯು ಪ್ರತಿಯೊಬ್ಬ ಕನ್ನಡಿಗನಿಗೂ ಹೆಮ್ಮೆ ಮತ್ತು ಸ್ಪೂರ್ತಿದಾಯಕವಾದುದು ಎಂದು ಹೇಳಿದ್ದಾರೆ.

<><><>

ಮಾಜಿ ಮುಖ್ಯಮಂತ್ರಿ ಹಾಗೂ ಬಿಜೆಪಿ ಹಿರಿಯ ನಾಯಕ ಬಿ.ಎಸ್.ಯಡಿಯೂರಪ್ಪ ಅವರ ಅಭಿಮಾನೋತ್ಸವ ಕಾರ್ಯಕ್ರಮವು ಚಿತ್ರದುರ್ಗದಲ್ಲಿ ಇಂದು ನಡೆಯುತ್ತಿದ್ದು, ಕೇಂದ್ರ ಸಚಿವರು ಸೇರಿದಂತೆ ಪಕ್ಷದ ಹಿರಿಯ ಮುಖಂಡರುಗಳು ಭಾಗಿಯಾಗಿದ್ದಾರೆ.

<><><>

ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷವು ಹಿಂದುಳಿದವರ ಪರವಾಗಿ ಇದ್ದೇವೆ ಎಂದು ಬಿಂಬಿಸಿಕೊಳ್ಳುತ್ತಿದೆ. ಆದರೆ ಹಿಂದುಳಿದ ಸಮಾಜಗಳ ಅಭಿವೃದ್ಧಿಗೆ ಮೀಸಲಿಟ್ಟಿದ್ದ ಹಣವೆಲ್ಲವು ಬೇರೆಡೆಗೆ ಹೋಗುತ್ತಿದೆ. ಪರಿಶಿಷ್ಟ ಸಮುದಾಯಗಳ ಹಣವನ್ನು ಗ್ಯಾರಂಟಿ ಯೋಜನೆಗಳಿಗೆ ಬಳಸಿಕೊಳ್ಳಲಾಗಿದೆ ಎಂದು ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಹೇಳಿದ್ದಾರೆ. ದೊಡ್ಡಬಳ್ಳಾಪುರದಲ್ಲಿ ನಡೆದ ಜೆಡಿಎಸ್ ರಜತ ಮಹೋತ್ಸವ ಸಮಾರಂಭದಲ್ಲಿ ಮಾತನಾಡಿದ ಅವರು, ಮೂರು ವರ್ಷಗಳ ಕಾಂಗ್ರೆಸ್ ಆಡಳಿತದಲ್ಲಿ ಅಹಿಂದ ವರ್ಗದ ಅಭಿವೃದ್ಧಿ ನಿಗಮಗಳಿಗೆ ಮೀಸಲಿಟ್ಟಿದ್ದ ಹಣ ವಿನಿಯೋಗವಾಗಿಯೇ ಇಲ್ಲ. ಮಹಿಳೆಯರಿಗೆ ೨ ಸಾವಿರ ಗೃಹಲಕ್ಷ್ಮೀ ಹಣ ನೀಡಿದ ಮಾತ್ರಕ್ಕೆ ಅವರ ಅಭಿವೃದ್ಧಿ ಸಾಧ್ಯವಿಲ್ಲ. ಮಹಿಳೆಯರಿಗೆ ಸಂವಿಧಾನಿಕವಾಗಿ ದೊರೆಯಬೇಕಿರುವ ಹಕ್ಕುಗಳನ್ನು ಕಲ್ಪಿಸಬೇಕು. ವಿದ್ಯಾವಂತ ಯುವ ಸಮುದಾಯಕ್ಕೆ ಉದ್ಯೋಗಗಳು ದೊರೆಯದಾಗಿದೆ. ಸರ್ಕಾರ ಕಾಟಾಚಾರಕ್ಕೆ ಉದ್ಯೋಗ ಮೇಳ ನಡೆಸುವ ಮೂಲಕ ವಿದ್ಯಾವಂತರನ್ನು ವಂಚಿಸಲಾಗುತ್ತಿದೆ ಎಂದು ಆರೋಪಿಸಿದರು.

<><><>

ಯಾದಗಿರಿ ಜಿಲ್ಲೆಯ ಗ್ರಾಮೀಣ ಭಾಗಗಳಲ್ಲಿರುವ ಒಳನಾಡು ಜಲಮೂಲಗಳನ್ನು ಸಮರ್ಪಕವಾಗಿ ಬಳಸಿಕೊಂಡು ಮೀನು ಉತ್ಪಾದನೆಯನ್ನು ಹೆಚ್ಚಿಸುವುದರ ಜೊತೆಗೆ ಮಹಿಳಾ ಸ್ವಸಹಾಯ ಸಂಘಗಳ ಆರ್ಥಿಕ ಸಬಲೀಕರಣಕ್ಕೆ ಆದ್ಯತೆ ನೀಡಲಾಗುತ್ತಿದೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಲವೀಶ್ ಒರಡಿಯಾ ಹೇಳಿದ್ದಾರೆ. ಯಾದಗಿರಿಯಲ್ಲಿ 'ಮತ್ಸ್ಯ ಸಂಜೀವಿನಿ' ಯೋಜನೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು, ಪ್ರಸಕ್ತ ಸಾಲಿನಲ್ಲಿ ಆರಂಭಗೊಂಡಿರುವ ಈ ಯೋಜನೆಯು ಜಿಲ್ಲೆಯ ವಿವಿಧ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೆರೆಗಳನ್ನು ಒಳಗೊಂಡಿದ್ದು, ಮುಂದಿನ ಹಂತದಲ್ಲಿ ಜಿಲ್ಲೆಯ ೫೦ ಕೆರೆಗಳಿಗೆ ಇದನ್ನು ವಿಸ್ತರಿಸುವ ಗುರಿ ಹೊಂದಲಾಗಿದೆ ಎಂದು ತಿಳಿಸಿದರು. 'ಮತ್ಸ್ಯ ಸಂಜೀವಿನಿ' ಯೋಜನೆಯ ಮೂಲಕ ಗ್ರಾಮೀಣ ಮಹಿಳಾ ಸಂಘಗಳಿಗೆ ಶಾಶ್ವತ ಜೀವನೋಪಾಯ ಕಲ್ಪಿಸುವುದರ ಜೊತೆಗೆ ಸ್ಥಳೀಯ ಮಟ್ಟದಲ್ಲಿ ಉದ್ಯೋಗ ಸೃಷ್ಟಿಗೂ ಒತ್ತು ನೀಡಲಾಗುತ್ತಿದೆ. ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿರುವ ಕೆರೆಗಳ ಸರ್ವೆ ಸಂಖ್ಯೆ, ಭೂ ಮಾಲೀಕತ್ವ, ಪ್ರಸ್ತುತ ಬಳಕೆ ಹಾಗೂ ನೀರಿನ ಲಭ್ಯತೆ ಸೇರಿದಂತೆ ಸಮಗ್ರ ಮಾಹಿತಿಯನ್ನು ಸಂಗ್ರಹಿಸಿ ವರದಿ ಸಲ್ಲಿಸಬೇಕು ಎಂದು ಅವರು ಸೂಚಿಸಿದರು.

<><><>

ಹವಾಮಾನ ಬದಲಾವಣೆಯ ಸವಾಲುಗಳನ್ನು ಎದುರಿಸಲು ಮಣ್ಣಿಗೆ ಒಗ್ಗಿಕೊಳ್ಳುವ ಪಾರಂಪರಿಕ ಬೀಜಗಳ ಸಂರಕ್ಷಣೆ ಇಂದಿನ ತುರ್ತು ಅಗತ್ಯವಾಗಿದೆ" ಎಂದು ಪಾರಂಪರಿಕ ಬೀಜ ಸಂರಕ್ಷಕಿ ಬೀಬಿ

ಫಾತಿಮಾ ತಿಳಿಸಿದರು. ದಾವಣಗೆರೆಯಲ್ಲಿ ಇಂದಿನಿಂದ ಆರಂಭಗೊಂಡ ಎರಡು ದಿನಗಳ 'ಪಾರಂಪರಿಕ ಬೀಜೋತ್ಸವ'ಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ರೈತರು ಬಿತ್ತನೆ ಬೀಜಗಳಿಗಾಗಿ ಬಹುರಾಷ್ಟ್ರೀಯ ಕಂಪನಿಗಳ ಮೇಲೆ ಅವಲಂಬಿತರಾಗದೆ, ತಾವೇ ಬೀಜ ಉತ್ಪಾದಿಸಿ ಸಂರಕ್ಷಿಸುವ ಮೂಲಕ ಸ್ವಾವಲಂಬಿಗಳಾಗಬೇಕು. ಪ್ರತಿಯೊಂದು ಹಳ್ಳಿಯಲ್ಲೂ ಸಮುದಾಯ ಬೀಜ ಬ್ಯಾಂಕ್‌ಗಳು ಸ್ಥಾಪನೆಯಾಗಬೇಕು ಎಂದರು. ತಾವು ಸ್ಥಾಪಿಸಿರುವ ಬೀಜ ಬ್ಯಾಂಕ್‌ಗಳ ಮೂಲಕ ೫೦೦ಕ್ಕೂ ಹೆಚ್ಚು ದೇಸಿ ಬೀಜಗಳನ್ನು ಉಳಿಸಿರುವುದಾಗಿ ಇದೇ ವೇಳೆ ಬೀಬಿ ಫಾತಿಮಾ ಅವರು ತಿಳಿಸಿದರು.

<><><><>

ಸರ್ವೇ ಕಾರ್ಯಕ್ಕೆ ವೈಜ್ಞಾನಿಕ ಉಪಕರಣಗಳನ್ನು ಅಳವಡಿಸಿಕೊಂಡ ವಿಮಾನಗಳು ಜಿಲ್ಲೆಯ ಕೆಲ ಭಾಗಗಳಲ್ಲಿ ಕೆಳಹಂತದಲ್ಲಿ ಹಾರಾಟ ನಡೆಸುತ್ತಿದ್ದು, ಸಾರ್ವಜನಿಕರು ಆತಂಕ ಪಡುವ ಅಗತ್ಯವಿಲ್ಲ ಎಂದು ಉತ್ತರಕನ್ನಡ ಜಿಲ್ಲಾಡಳಿತ ತಿಳಿಸಿದೆ. ಉತ್ತರಕನ್ನಡ ಜಿಲ್ಲೆಯ ಹಲವು ಭಾಗಗಳಲ್ಲಿ ವಿಮಾನಗಳು ಕೆಳಹಂತದಲ್ಲಿ ಹಾರಾಟ ನಡೆಸುತ್ತಿದ್ದು, ಇದರಿಂದ ಸಾರ್ವಜನಿಕರಲ್ಲಿ ಕುತೂಹಲ ಹಾಗೂ ಆತಂಕಗಳು ವ್ಯಕ್ತವಾಗುತ್ತಿರುವ ಹಿನ್ನಲೆ ಜಿಲ್ಲಾಡಳಿತ ಸ್ಪಷ್ಟನೆ ನೀಡಿದ್ದು, ಬೆಂಗಳೂರಿನ ಭಾರತೀಯ ಭೂವೈಜ್ಞಾನಿಕ ಸರ್ವೇಕ್ಷಣಾ ಸಂಸ್ಥೆಯು National Aero geophysical Mapping Programme (NAGMP) ಭಾಗವಾಗಿ NAGMP Block-7 ಸರ್ವೇಕ್ಷಣಾ ಕಾರ್ಯವನ್ನು ಕರ್ನಾಟಕ, ಮಹಾರಾಷ್ಟ್ರ ಹಾಗೂ ಗೋವಾ ರಾಜ್ಯಗಳಲ್ಲಿ ಕೈಗೊಂಡಿದೆ. ಹೀಗಾಗಿ ಉತ್ತರ ಕನ್ನಡ ಜಿಲ್ಲೆಯಾದ್ಯಂತ ಸದರಿ ಸರ್ವೇ ಕಾರ್ಯಕ್ಕೆ ವೈಜ್ಞಾನಿಕ ಉಪಕರಣಗಳನ್ನು ಅಳವಡಿಸಿಕೊಂಡ ವಿಮಾನಗಳು ಕೆಳಹಂತದಲ್ಲಿ ಹಾರಾಟ ನಡೆಸುತ್ತಿದೆ. ಈ ಸರ್ವೆಯಿಂದ ಪಡೆದ ಮಾಹಿತಿಯನ್ನು ಖನಿಜಾನ್ವೇಷಣೆಯಲ್ಲಿ ತೊಡಗಿರುವ ಸರ್ಕಾರಿ, ಖಾಸಗಿ ಸಂಸ್ಥೆಗಳು ಹಾಗೂ ಸಾರ್ವಜನಿಕರಿಗೆ ಲಭ್ಯವಾಗುವಂತೆ National Geoscience Data Repository (NGDR) ಅಳವಡಿಸಿಕೊಳ್ಳುತ್ತದೆ. ಆದ್ದರಿಂದ, ಸದರಿ ವೈಜ್ಞಾನಿಕ ಸರ್ವೇ ಕಾರ್ಯದಲ್ಲಿ ನಿರತವಾಗಿರುವ ಕೆಳ ಹಂತದ ವಿಮಾನ ಹಾರಾಟದ ಕುರಿತು ಸಾರ್ವಜನಿಕರು ಯಾವುದೇ ಆತಂಕಕ್ಕೆ ಒಳಗಾಗಬಾರದೆಂದು ಜಿಲ್ಲಾಡಳಿತ ತಿಳಿಸಿದೆ.

<><><><>

ಕೋಲಾರ ಜಿಲ್ಲಾಧಿಕಾರಿಗಳ ಕಾರ್ಯಾಲಯದಲ್ಲಿ ಬಾಕಿ ಇರುವ ಭೂ ಸ್ವಾಧೀನ ಹಾಗೂ ವಿವಿಧ ಸಿವಿಲ್ ವ್ಯಾಜ್ಯಗಳ ಪರಿಣಾಮಕಾರಿ ನಿರ್ವಹಣೆಗಾಗಿ ಗುತ್ತಿಗೆ ಆಧಾರದ ಮೇಲೆ ಕಾನೂನು ಸಲಹೆಗಾರರ ಹುದ್ದೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಭೂಸ್ವಾಧೀನ ಪ್ರಕರಣಗಳಲ್ಲಿ ನ್ಯಾಯಾಲಯಗಳು ನೀಡುವ ಹೆಚ್ಚುವರಿ ಪರಿಹಾರದ ಆದೇಶಗಳ ವಿರುದ್ಧ

ಮೇಲ್ಮನವಿ ಸಲ್ಲಿಸುವ ಮುನ್ನ ಕಾನೂನು ಅಧಿಕಾರಿಗಳ ಅಭಿಪ್ರಾಯ ಪಡೆಯುವುದು ಮತ್ತು ಆರ್ಥಿಕ ಹೊಣೆಗಾರಿಕೆಯನ್ನು ಲೆಕ್ಕ ಹಾಕುವುದು ಅತ್ಯಗತ್ಯವಾಗಿದೆ. ಜಿಲ್ಲಾಡಳಿತದ ಕಾರ್ಯಬಾಹುಳ್ಯದ ನಡುವೆ ಇಂತಹ ವ್ಯಾಜ್ಯಗಳ ಬಗ್ಗೆ ಹೆಚ್ಚಿನ ಗಮನಹರಿಸಲು ಸಾಧ್ಯವಾಗದಿರುವುದನ್ನು ಮನಗಂಡು ಸರ್ಕಾರವು ಈ ವಿಶೇಷ ಹುದ್ದೆಯನ್ನು ಸೃಜಿಸಿದೆ. ಸರ್ಕಾರದ ಆದೇಶದಂತೆ ಈ ಹುದ್ದೆಯ ಅವಧಿ ೨೦೨೪ರ ಮಾರ್ಚ್ ೩೧ ರವರೆಗೆ ಇರಲಿದೆ ಎಂದು ಪ್ರಕಟಣೆ ತಿಳಿಸಿದೆ.

<><><>

ಕೆಜಿಎಫ್ ನಗರದಲ್ಲಿ ಏಕಬಳಕೆ ಪ್ಲಾಸ್ಟಿಕ್ ನಿಯಂತ್ರಿಸಲು ನಗರಸಭೆ, ಪರಿಸರ ಇಲಾಖೆ ಜೊತೆಗೂಡಿ ವಿಶೇಷ ಕಾರ್ಯಪಡೆ ರಚಿಸಲಾಗಿದೆ.ಈ ಕಾರ್ಯಪಡೆಯು ಅಕ್ರಮವಾಗಿ ದಾಸ್ತಾನು ಮಾಡಿರುವ ಪ್ಲಾಸ್ಟಿಕ್ ಬಳಕೆ ವಿರುದ್ಧ ಕಾರ್ಯಾಚರಣೆ ಆರಂಭಿಸಿದ್ದು, ಮೊದಲನೇ ದಿನವೇ ೧೩೦ ಕೆಜಿ ಏಕಬಳಕೆ ಪ್ಲಾಸ್ಟಿಕ್‌ಅನ್ನು ನಗರಸಭೆ ಹಿರಿಯ ಆರೋಗ್ಯಾಧಿಕಾರಿಗಳ ತಂಡ ವಶಪಡಿಸಿಕೊಂಡಿದೆ ಎಂದು ಪೌರಾಯುಕ್ತ ಶ್ರೀಧರ್ ತಿಳಿಸಿದರು. ವಿಶೇಷ ಕಾರ್ಯಪಡೆಯಲ್ಲಿ ಒಬ್ಬರು ಹಿರಿಯ ಆರೋಗ್ಯಾಧಿಕಾರಿ ಹಾಗೂ ನಗರಸಭೆ ಸಿಬ್ಬಂದಿ ಜೊತೆಗೆ ಪೌರಕಾರ್ಮಿಕರನ್ನು ನೇಮಿಸಿಕೊಳ್ಳಲಾಗಿದೆ. ಕೆಜಿಎಫ್ ನಗರದಲ್ಲಿ ಅಕ್ರಮ ದಾಸ್ತಾನು ಮಾಡಿರುವ ಅಂಗಡಿಗಳ ಮೇಲೆ ದಾಳಿ ನಡೆಸಿ ದಂಡ ವಿಧಿಸಿ, ಮುಂದಿನ ದಿನಗಳಲ್ಲಿ ಪ್ಲಾಸ್ಟಿಕ್ ಮಾರಾಟ ಕಂಡು ಬಂದಲ್ಲಿ ಅಂಗಡಿ ಪರವಾನಿಗೆ ರದ್ದುಗೊಳಿಸಲಾಗುವುದೆಂದು ಅವರು ತಿಳಿಸಿದರು.

<><><>

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಗಣಿಗಾರಿಕೆಯಿಂದ ಹಾನಿಯಾದ ಪ್ರದೇಶಗಳ ಸುಧಾರಣೆ ಮತ್ತು ಸಂತ್ರಸ್ತರ ಉಪಯೋಗಕ್ಕಾಗಿ ಜಿಲ್ಲಾ ಖನಿಜ ಪ್ರತಿಷ್ಠಾನ ನಿಧಿಯ ಬಳಕೆಯ ಬಗ್ಗೆ ಚರ್ಚಿಸಲು ಶೀಘ್ರದಲ್ಲೇ ಜಿಲ್ಲೆಯ ಶಾಸಕರೊಂದಿಗೆ ಸಭೆ ನಡೆಸಲಾಗುವುದು ಎಂದು ಆರೋಗ್ಯ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>